# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

## Visvesvaraya Technological University

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

ಡಾ. ಪ್ರಸಾದ ಬಿ. ರಾಂಪುರೆ ಎಂ.ಇ., ಪಿ.ಹೆಚ್.ಡಿ
ಕುಲಸಚಿವರು

ದೂರವಾಣಿ ಸಂ: 0831-2405468
ಫ್ಯಾಕ್ಸ್ ಸಂ : 0831-2405467


ಸಂ. ವಿತಾವಿ/ಬಿಜಿಎಮ್/ಎನ್.ಎಸ್.ಎಸ್/ನ.ಮು.ಭಾ/2026-27/01

ದಿನಾಂಕ: 08 JUL 2026

**ಸುತ್ತೋಲೆ**

ವಿಷಯ: ನಶಾ ಮುಕ್ತ ಭಾರತ ಅಭಿಯಾನ ಅಡಿಯಲ್ಲಿ ಮಾದಕ ವಸ್ತುಗಳ ಬೇಡಿಕೆ ಕಡಿತಕ್ಕಾಗಿ ಜಂಟಿ ಕ್ರಿಯಾ ಯೋಜನೆ ಮತ್ತು ಅನುಷ್ಠಾನದ ಕುರಿತು.

ಉಲ್ಲೇಖ:ಯುಸೇಇ/ರಾಸೇಯೋ/58/2026-27/100 ದಿ:04.07.2026

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನಕ್ಕೊಳಪಡುವ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳಲ್ಲಿ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯಡಿ ಮೈ ಭಾರತ್ ಮತ್ತು ಎನ್.ಎಸ್.ಎಸ್. ಮೂಲಕ ದೇಶದ ಯುವಕರನ್ನು ಒಟ್ಟುಗೂಡಿಸಿ ಸರ್ಕಾರದ ಆದೇಶದಂತೆ ಜನ ಜಾಗೃತಿ ಮೂಡಿಸಲು ನಿರ್ಧರಿಸಲಾಗಿದೆ.

ಅದ್ದರಿಂದ, ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು ಮೈ ಭಾರತ್ ಪೋರ್ಟಲ್ ಮೂಲಕ ಎನ್.ಎಸ್.ಎಸ್. ಸ್ವಯ ಸೇವಕರು, ಯುವಕರು ಹಾಗೂ ವಿದ್ಯಾರ್ಥಿಗಳು **"ನಶಾ ಮುಕ್ತಿ ಮಿತ್ರ"** ಎಂದು ನೊಂದಾಯಿಸಿಕೊಂಡು, ಸ್ಥಳೀಯ ಸಮುದಾಯಗಳಲ್ಲಿ ಜನ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುವುದು ಹಾಗೂ ಸಂಬಂಧಪಟ್ಟ ಕಾರ್ಯಕ್ರಮಗಳ ಪೋಸ್ಟರ್‌ಗಳು ಮತ್ತು ಜಾಲತಾಣಗಳಲ್ಲಿ ನಶಾ ಮುಕ್ತ ಭಾರತ ಅಭಿಯಾನದ LOGO, MASCOT and HELPLINE (14446)ಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಲಾಗಿದೆ.

ಮುಂದುವರೆದು, ನೊಂದಾಯಿತ ಸ್ವಯಂ ಸೇವಕರ ಸಂಖ್ಯೆಯನ್ನು ವಿ.ತಾ.ವಿ.ಯ, ರಾ.ಸೇ.ಯೋ. ಕೋಶಕ್ಕೆ (e-mail:nss@vtu.ac.in) ಇ–ಮೇಲ್ ಮೂಲಕ ದಿನಾಂಕ: 25.07.2026ರ ಒಳಗಾಗಿ ಸಲ್ಲಿಸಲು ಸೂಚಿಸಲಾಗಿದೆ.

Ram 08/07/26

ಕುಲಸಚಿವರು

ಇವರಿಗೆ,

ಪ್ರಾಂಶುಪಾಲರು/ಸಂಯೋಜನಾಧಿಕಾರಿಗಳು
ವಿ.ತಾ.ವಿ. ಅಧೀನಕ್ಕೊಳಪಡುವ ಸಂಬಂಧಪಟ್ಟ
ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ಪ್ರಾದೇಶಿಕ ನಿರ್ದೇಶಕರು, ವಿತಾವಿಯ ಪ್ರಾದೇಶಿಕ ಕಛೇರಿ ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಬೆಂಗಳೂರು.
3. ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಅಧ್ಯಕ್ಷರುಗಳು/ಸಂಯೋಜಕರು ಬೆಳಗಾವಿ.
4. ನಿರ್ದೇಶಕರು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
5. ಕಛೇರಿ ಕಡತಕ್ಕೆ.